**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 1379/2016** **CW**-17 **PW**-7

**ಸಾಕ್ಷಿಯನ್ನು ದಿಃ 25.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಷಣ್ಮುಕಾಚಾರಿ |
| ತಂದೆಯ ಹೆಸರುಃ | ಲೇಟ್ ಮಲ್ಲೇಶಚಾರಿ |
| ವಯಸ್ಸುಃ | 64 ವರ್ಷ |
| ವೃತ್ತಿಃ | ನಿವೃತ್ತ ಎ ಎಸ್ ಐ |
| ವಾಸ ಸ್ಥಳಃ | ದೊಡ್ಡಕೋಡಿಹಳ್ಳಿ ಗ್ರಾಮ ಬೇಲೂರು ತಾಲ್ಲೂಕು |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು 2012 ರಿಂದ 2017 ರವರೆಗೆ ನಾನು ಚನ್ನರಾಯಪಟ್ಟಣ ಚನ್ನರಾಯಪಟ್ಟಣದ ಹೆಚ್ ಸಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 02.03.2016 ರಂದು ರಾತ್ರಿ 9.30 ರ ಸಮಯದಲ್ಲಿ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚನ್ನರಾಯಪಟ್ಟಣ ಸರ್ಕಾರಿ ಆಸ್ಪತ್ರೆಯಿಂದ ಮೊಮೋ ಬಂದಿದ್ದು ಅದರಂತೆ ನಾನು ಆಸ್ಪತ್ರೆಗೆ ಹೋಗಿ ಚಾಸಾ-1 ರವರಿಂದ ಹೇಳಿಕೆ ಪಡೆದು ಠಾಣೆಗೆ ಹಿಂದುರುಗಿ ರಾತ್ರಿ 10.15 ರ ಸಮಯದಲ್ಲಿ ಹೇಳಿಕೆ ದೂರಿನ ಆಧಾರದ ಮೇಲೆ ಠಾಣಾ ಮೊ. ಸಂಖ್ಯೆ 112/2016 ರಂತೆ ಪ್ರಕರಣವನ್ನು ದಾಖಲಿಸಿ ಪ್ರ ವ ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿ ಹೇಳಿಕೆ ದೂರನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-12 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು.

ಸಾಕ್ಷಿ ಪ್ರ ವ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-13 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು.

ಅದೇ ದಿನ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ–18 ರವರಿಗೆ ಹಸ್ತಾಂತರಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಎಸ್ ಜಿ ರವರಿಂದ ಃ**

ಚಾಸಾ–1 ರವರ ಹೇಳಿಕೆಯನ್ನು ವೈದ್ಯರ ಸಮಕ್ಷಮ ಪಡೆದಿಲ್ಲ. ಚಾಸಾ–1 ರವರು ನೀಡಿದ ಸುಳ್ಳು ದೂರಿನ ಆಧಾರದ ಮೇಲೆ ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**